# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ, ಪುಲಿಕೇಶಿನಗರ ಉಪವಿಭಾಗ, ರಾಬರ್ಟಸನ್ಸ್ ರಸ್ತೆ, ಫ್ರೇಜರ್ ಟೌನ್**

ಸ.ಕಾ.ನಿ.ಅ/ಪುನ/ಪಿಆರ್/ 431 /2021–22 ದಿನಾಂಕ: 09.2.2022

**ದಿನಾಂಕ:– 09 –02–2022 ರಂದು ವಾರ್ಡ್ ನಂ.78 ರ ವಾರ್ಡ್ ಸಮಿತಿ ಹಾಗೂ ವಾರ್ಡ್ ವಿಪತ್ತು ನಿರ್ವಹಣಾ ಸಮಿತಿಯ ಸಭೆಯ ನಡುವಳಿಗಳು:–**

ವಾರ್ಡ್ ಸಮಿತಿಯ ಸಭೆಯು ಪ್ರಾರಂಭಗೊಳ್ಳುತ್ತಿದಂತೆ ನೋಡಲ್ ಅಧಿಕಾರಿಗಳಾದ ಶ್ರೀ.ಜಿ.ತಿಪ್ಪೇಸ್ವಾಮಿ ರವರು ಕಮಿಟಿ ಸಭೆಯ ಸದಸ್ಯರು ಮತ್ತು ಅಧಿಕಾರಿಗಳನ್ನು ಸ್ವಾಗತಿಸಿದರು.

ಹಿಂದೆ ನಡೆದ ಸಭೆಯಲ್ಲಿ ತಿಳಿಸಲಾಗಿದ ವಿಷಯಗಳ ಬಗ್ಗೆ ಈ ಕೆಳಕಂಡ ಸಭೆಯ ಕಾರ್ಯಸೂಚಿಯಂತೆ ತೆಗೆದು ಕೊಂಡಿರುವ ಕ್ರಮಗಳ ಬಗ್ಗೆ ತಿಳಿಸಲು ಸೂಚಿಸಿರುತ್ತಾರೆ.

1. ಮಾಸ್ಕ್ ರಸ್ತೆಯಲ್ಲಿ ಬಿದ್ದಿದ ಘನತ್ಯಾಜ್ಯವನ್ನು ತೆರವುಗೊಳಿಸಲಾಗಿರುತ್ತದೆ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿರುತ್ತಾರೆ.
2. ಮಾಸ್ಕ್ ರಸ್ತೆಯಲ್ಲಿ ಹಾಕಿದ ರಸ್ತೆ ಮಿಡಿಯನ್ ಅನ್ನು ತೆರವುಗೊಳಿಸಲು ಸಂಬಂಧಪಟ್ಟ ಇಲಾಖೆಗೆ ಸೂಚಿಸಲಾಗಿರುತ್ತದೆ.
3. ಸಾರ್ವಜನಿಕರ ಸುಗಮ ಸಂಚಾರಕ್ಕೆ ವಾರ್ಡಿನ ಮುಖ್ಯರಸ್ತೆಗಳಲ್ಲಿ ಬಿದ್ದಿರುವ ಗುಂಡಿಗಳನ್ನು ಮುಚ್ಚಲು ತಿಳಿಸಿರುತ್ತಾರೆ.
4. ಪಾದವಾರಿ ಮಾರ್ಗಗಳನ್ನು ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಗಿರುತ್ತದೆ.
5. ರಾಬರ್ಟ್ ಸನ್ ರಸ್ತೆಯಲ್ಲಿ ಡಯಾಲಿಸಿಸ್ ಕೇಂದ್ರವನ್ನು ನಿರ್ಮಾಣ ಮಾಡಬೇಕಲಾಗಿರುವುದರಿಂದ ಸದರಿ ಜಾಗದಲ್ಲಿರುವ ಶಿಶುವಿಹಾರ ಕೇಂದ್ರವನ್ನು ಹಾಗೂ ಹೊಲಿಗೆ ತರಬೇತಿ ಕೇಂದ್ರವನ್ನು ಧನಕೋಟಿ ಲೇನ್‌ನಲ್ಲಿ ಹೊಸದಾಗಿ ನಿರ್ಮಿಸಿರುವ ಬಿ.ಬಿ.ಎಂಪಿ ಕಟ್ಟಡಕ್ಕೆ ಸ್ಥಳಾಂತರಿಸುವ ಬಗ್ಗೆ ಚರ್ಚಿಸಲಾಯಿತು.
6. ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ವಿವಿಧ ಇಲಾಖೆಗಳ ಕಾಮಗಾರಿಗಳನ್ನು ತುರ್ತಾಗಿ ನಿರ್ವಹಿಸಿ ಪೂರ್ಣಗೊಳಿಸಲು ತಿಳಿಸಲಾಯಿತು.

ನಂತರ ಮುಂದಿನ ಸಭೆಯೊಳಗೆ ವಾರ್ಡ್ ವ್ಯಾಪ್ತಿಯಲ್ಲಿನ ಮಾಹಿತಿಯನ್ನು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಮಾಹಿತಿಗಳನ್ನು ನೀಡಲು ತಿಳಿಸಿ ಸಭೆಯನ್ನು ಮುಕ್ತಾಯಗೊಳಿಸಲು ಸೂಚಿಸುತ್ತಾ, ಎಲ್ಲರಿಗೂ ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡಲ್ ಅಧಿಕಾರಿಗಳು ಕಾರ್ಯದರ್ಶಿ

**ಪ್ರತಿಯನ್ನು:**

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಉಪ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ವಿಭಾಗ ರವರ ಅವಗಾಹನೆಗಾಗಿ ಕಳುಹಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್ / ಪುಲಿಕೇಶಿನಗರ) ರವರ ಅವಗಾಹನೆಗಾಗಿ ಕಳುಹಿಸಿದೆ.

Scanned with CamScanner